ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	758
ಸದಸ್ಯರ ಹೆಸರು	:	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	05/03/2021
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು.

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
(ಅ)	2015ರ ಜನಸಂಖ್ಯೆಯ ಆಧಾರದ ಮೇಲೆ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಸರ್ಕಾರದ ನಿಲುವೇನು;	ಕರ್ನಾಟಕ ಪುರಸಭೆ ಕಾಯ್ದೆ 1964ರ ವ್ಯಾಖ್ಯಾನ 20(ಎ) ರಡಿ ಜನಸಂಖ್ಯೆ ಎನ್ನುವುದಕ್ಕೆ ಈ ಕೆಳಕಂಡಂತೆ ವಿವರಣೆ ನೀಡಲಾಗಿದೆ. [(20-A) **"Population"** means the population as ascertained at the last preceding census of which the relevant figures have been published] ಪ್ರಸ್ತುತ 2011ರ ಜನಗಣತಿ ಪ್ರಕಟಗೊಂಡಿದ್ದು, ಸದರಿ ಜನಗಣತಿಯನ್ವಯ ಜನಸಂಖ್ಯೆಯನ್ನು ಆಧರಿಸಿ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತಿದೆ. 2015ರ ಜನಸಂಖ್ಯೆಯ ಆಧಾರದ ಮೇಲೆ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಕಾಯ್ದೆಯಲ್ಲಿ ಅವಕಾಶವಿರುವುದಿಲ್ಲ.
(ಆ)	ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು;	ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆ ಅಧಿನಿಯಮ 1964 ರ ಕಲಂ 349 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು. • ಅಂತಹ ಪ್ರದೇಶದ ಜನಸಂಖ್ಯೆಯು 10,000ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000ಕ್ಕೆ ಹೆಚ್ಚಿಲ್ಲದಂತಿರಬೇಕು. • ಅಂತಹ ಪ್ರದೇಶದ ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು. • ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ. 50 ಕ್ಕಿಂತ ಕಡಿಮೆ ಇಲ್ಲದಿರುವುದು.

		ಮುಂದುವರೆದು, ದಿ:19.03.2015 ರ ಸಚಿವ ಸಂಪುಟ ಸಭೆಯ ನಿರ್ಣಯದಂತೆ 15,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗಿರುತ್ತದೆ.
(ಇ)	ಬೆಳಗಾವಿ ಜಿಲ್ಲೆಯ ಹಲವಾರು ಗ್ರಾಮ ಪಂಚಾಯಿತಿಗಳು ನಿಗದಿಗಿಂತ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿದ್ದು ಅವುಗಳನ್ನು ಯಾವ ಕಾಲಮಿತಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು?	ಕರ್ನಾಟಕ ಪುರಸಭೆ ಕಾಯ್ದೆ 1964ರಡಿ ನಿಗದಿಪಡಿಸಿರುವ ಮಾನದಂಡಗಳನ್ನು ಪೂರೈಸುವಂತಹ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಜಿಲ್ಲಾಧಿಕಾರಿಗಳಿಂದ ಸೂಕ್ತ ಹಾಗೂ ಅರ್ಹ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ನಿಯಮಾನುಸಾರ ಕ್ರಮವಹಿಸಲಾಗುತ್ತದೆ. ಆದರೆ, ಕೇಂದ್ರ ಜನಗಣತಿ ನಿರ್ದೇಶನಾಲಯದ ಸೂಚನೆಯನ್ವಯ ಸರ್ಕಾರದ ಆದೇಶ ಸಂಖ್ಯೆ: ಕಂಇ 18 ಎಲ್ ಆರ್ ಡಿ 2019, ದಿನಾಂಕ 18/09/2020 ರಲ್ಲಿ, ದಿನಾಂಕ 01/01/2021 ರಿಂದ ಜನಗಣತಿ ಕಾರ್ಯ ಮುಕ್ತಾಯವಾಗುವವರೆಗೂ ಯಾವುದೇ ಆಡಳಿತಾತ್ಮಕ ಗಡಿಗಳನ್ನು ಬದಲಾವಣೆ ಮಾಡದಿರಲು ಆದೇಶ ಹೊರಡಿಸಲಾಗಿರುವ ಹಿನ್ನೆಲೆಯಲ್ಲಿ ಪ್ರಸ್ತುತ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಅವಕಾಶವಿರುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಕಾಗವಾಡ ಮತ್ತು ಯರಗಟ್ಟಿ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ಮುಂದುವರೆದು, ಬೆಳಗಾವಿ ಜಿಲ್ಲೆಯ ಈ ಕೆಳಕಂಡ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲು ಕರಡು ಅಧಿಸೂಚನೆಗಳನ್ನು ಹೊರಡಿಸಲಾಗಿದೆ. 1) ಮಚ್ಚೆ 2) ಪೀರನವಾಡಿ 3) ಅಂಕಲಗಿ ಮತ್ತು ಅಕ್ಕತಂಗೇರಹಾಳ ಸದರಿ ಕರಡು ಅಧಿಸೂಚನೆಗಳಿಗೆ ಸ್ವೀಕೃತವಾಗಿರುವ ಆಕ್ಷೇಪಣೆಗಳ ಕುರಿತು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಹಾಗೂ ಬೆಳಗಾವಿ ಜಿಲ್ಲಾಧಿಕಾರಿಗಳಿಂದ ವರದಿ ಕೋರಲಾಗಿದ್ದು, ತ್ವರಿತವಾಗಿ ವರದಿ ಪಡೆದು ಅಂತಿಮ ಅಧಿಸೂಚನೆ ಹೊರಡಿಸುವ ಕುರಿತು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಂಖ್ಯೆ: ನಅಇ/06/ಎಲ್‌ಸಿಕ್ಯೂ/2021

(ಎನ್. ನಾಗರಾಜು ಎಂ.ಟಿ.ಬಿ)

ಪೌರಾಡಳಿತ ಮತ್ತು ಸಕ್ಕರೆ ಸಚಿವರು